## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 203 |
| **ಸದಸ್ಯರ ಹೆಸರು** | ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ** | 09.12.2025 |
| **ಉತ್ತರಿಸುವ ಸಚಿವರು** | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮುಖ್ಯ ಖನಿಜ, ಉಪಖನಿಜ ಹಾಗೂ ನಿರ್ಧಿಷ್ಟವಲ್ಲದ ಉಪಖನಿಜಗಳ ಗಣಿಗಾರಿಕೆ ನಡೆಸಲು ಎಷ್ಟು ಗುತ್ತಿಗೆದಾರರಿಗೆ ಅನುಮತಿ ನೀಡಲಾಗಿದೆ, ಅನುಮತಿ ನೀಡುವಾಗ ಅನುಸರಿಸುವ ಮಾನದಂಡಗಳೇನು; (ವಿವರ ನೀಡುವುದು) | • ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮುಖ್ಯ ಖನಿಜ ಮತ್ತು ಉಪಖನಿಜಗಳ ಗಣಿಗಾರಿಕೆಗೆ ಮಂಜೂರು ಮಾಡಿರುವ ಗಣಿಗುತ್ತಿಗೆಗಳ ಸಂಖ್ಯೆ ಈ ಕೆಳಕಂಡಂತಿದೆ: |

| ಕ್ರ.ಸಂ | ಜಿಲ್ಲೆ | ಮುಖ್ಯ ಖನಿಜ | ಉಪ ಖನಿಜ |
|---|---|---|---|
| 1 | ಕಲಬುರಗಿ | 11 | 297 |
| 2 | ಯಾದಗಿರಿ | 0 | 35 |

**ಗಣಿ ಗುತ್ತಿಗೆ ಮಂಜೂರಾತಿಗೆ ಅನುಸರಿಸಲಾಗುವ ಮಾನ ದಂಡಗಳು: -**

1. **ಮುಖ್ಯ ಖನಿಜಗಳ** ಗಣಿಗಾರಿಕೆಗೆ ಖನಿಜಗಳ ಲಭ್ಯತೆ ದೃಢಪಟ್ಟಿರುವ ಪ್ರದೇಶಗಳಲ್ಲಿ ಎಂಎಂಡಿಆರ್ ತಿದ್ದುಪಡಿ ಕಾಯ್ದೆ, 2015 ರ ಕಲಂ 10(B) ರಡಿಯಲ್ಲಿ ಹರಾಜು ಮೂಲಕ ಗಣಿಗುತ್ತಿಗೆ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.
2. ಮುಖ್ಯ ಖನಿಜ ಲಭ್ಯತೆ ದೃಢಪಡದ ಪ್ರದೇಶಗಳಲ್ಲಿ ಎಂಎಂಡಿಆರ್ ತಿದ್ದುಪಡಿ ಕಾಯ್ದೆ, 2015 ರ ಕಲಂ 11 ರಡಿಯಲ್ಲಿ ಸಂಯುಕ್ತ ಪರವಾನಿಗೆ **(Composite Licence) (Prospecting-cum-Mining Lease)** ನ್ನು ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.
3. ಸದರಿ ಕಾಯ್ದೆಯಡಿ ಯಲ್ಲಿ ರೂಪಿಸಲಾದ **Mineral (Auction) Rules, 2015**ರ ನಿಯಮ 9(4) ಮತ್ತು 10 ರಂತೆ ಹರಾಜು ಮಾಡಿ ಯಶಸ್ವಿಯಾದ ಬಿಡ್‌ದಾರರನ್ನು ಪರಿಗಣಿಸಿದ ನಂತರ **The Mineral (Auction) Rules, 2015** ಮತ್ತು **Mineral (Other Than Atomic and Hydro Carbons Energy Minerals) Concession Rules 2016**ರಡಿ ಗಣಿಗುತ್ತಿಗೆ/ ಸಂಯುಕ್ತ ಪರವಾನಿಗೆ ಮಂಜೂರು ಮಾಡಲು ಅವಕಾಶಕಲ್ಪಿಸಲಾಗಿದೆ.
4. **ಉಪಖನಿಜಗಳ ಗಣಿ** ಗುತ್ತಿಗೆ ಮಂಜೂರಾತಿಗೆ ಎಂ.ಎಂ.ಡಿ & ಆರ್ ಕಾಯ್ದೆ 1957ರ ಕಲಂ-15 ರಂತೆ ರಾಜ್ಯ ಸರ್ಕಾರಗಳಿಗೆ ನೀಡಿರುವ ಅಧಿಕಾರದನ್ವಯ ರಾಜ್ಯದಲ್ಲಿ ಕರ್ನಾಟಕ ಉಪಖನಿಜಗಳ ರಿಯಾಯಿತಿ ನಿಯಮಗಳು-1994ನ್ನು ಜಾರಿಗೆ ತರಲಾಗಿರುತ್ತದೆ.
5. ಸದರಿ ನಿಯಮಗಳಂತೆ ಉಪಖನಿಜಗಳ ಗಣಿಗಾರಿಕೆಗೆ ಗುತ್ತಿಗೆ/ ಲೈಸನ್ಸ್‌ಗಳನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ.
6. ಸರ್ಕಾರಿ ಜಮೀನುಗಳಲ್ಲಿ ಲಭ್ಯವಿರುವ ಉಪಖನಿಜ ನಿಕ್ಷೇಪಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಗುರುತಿಸಿ ಕಂದಾಯ ಮತ್ತು ಅರಣ್ಯ ಇಲಾಖೆಗಳಿಂದ ನಿರಾಕ್ಷೇಪಣಾ ಪತ್ರ ಪಡೆದ ನಂತರ ಅಧಿಸೂಚನೆ ಜಾರಿ

| | | |
|---|---|---|
| | | ಮಾಡಬೇಕಾಗಿರುತ್ತದೆ. ನಂತರ ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಿಂದ ಗುರುತಿಸಿರುವ ಉಪಖನಿಜದ ನಿಕ್ಷೇಪದ ಪ್ರದೇಶದಲ್ಲಿ ಗಣಿಗಾರಿಕೆ ನಡೆಸಲು ಟೆಂಡರ್ ಕಂ ಹರಾಜು ಪ್ರಕ್ರಿಯೆ ಕೈಗೊಂಡು ನಿರ್ದಿಷ್ಟ ಉಪಖನಿಜಗಳಿಗೆ ಸರ್ಕಾರದಿಂದ ಮತ್ತು ನಿರ್ದಿಷ್ಟವಲ್ಲದ ಉಪಖನಿಜಗಳಿಗೆ ಸಂಬಂಧಿಸಿದಂತೆ ನಿರ್ದೇಶಕರಿಂದ ಬಿಡ್ ಸ್ವೀಕರಿಸಿಕೊಂಡ ನಂತರ ಯಶಸ್ವಿ ಬಿಡ್ ದಾರರಿಂದ ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆಯನ್ನು ಮಂಜೂರು ಮಾಡಲಾಗುತ್ತದೆ.<br>7. ದಿನಾಂಕ:17.03.2023 ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು-2023ನ್ನು ಜಾರಿಗೆ ತಂದಿದ್ದು, ದಿನಾಂಕ:12.08.2016ರ ಪೂರ್ವದಲ್ಲಿ ಕಲ್ಲುಗಣಿ ಗುತ್ತಿಗೆ ಮಂಜೂರಾತಿ ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಪರಿಗಣಿಸಲಾಗಿದ್ದು, ಸದರಿ ಅರ್ಜಿಗಳ ಪ್ರದೇಶಕ್ಕೆ ಕಂದಾಯ ಮತ್ತು ಅರಣ್ಯ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದ ನಂತರ ಕಲ್ಲುಗಣಿ ಗುತ್ತಿಗೆ ಮಂಜೂರಾತಿಗೆ ಕ್ರಮವಹಿಸಬೇಕಾಗಿರುತ್ತದೆ.<br>8. ಪಟ್ಟಾ ಜಮೀನುಗಳಲ್ಲಿ ಉಪಖನಿಜಗಳ ಗಣಿಗಾರಿಕೆಗೆ ಪಟ್ಟಾದಾರರಿಗೆ ಅಥವಾ ಪಟ್ಟಾದಾರರು ಒಪ್ಪಿಗೆ ನೀಡುವ ವ್ಯಕ್ತಿಗಳಿಗೆ ಕಂದಾಯ ಮತ್ತು ಅರಣ್ಯ ಇಲಾಖೆ ನಿರಾಕ್ಷೇಪಣಾ ಪತ್ರ, ಭೂಪರಿವರ್ತನೆ ಆದೇಶ, ಅನುಮೋದಿತ ಕ್ವಾರಿಯಿಂಗ್ ಪ್ಲಾನ್ ಮತ್ತು ಪರಿಸರ ಅನುಮತಿ ಪತ್ರ ಪಡೆದು ಜಿಲ್ಲಾ ಟಾಸ್ಕ್ ಫೋರ್ಸ್ (ಗಣಿ) ಸಮಿತಿಯಲ್ಲಿ ಮಂಡಿಸಿ ಅನುಮೋದನೆ ಪಡೆದು ಲೈಸೆನ್ಸ್ ನೀಡಲಾಗುತ್ತಿದೆ. |
| ಆ) | ಕಳೆದ 2 ವರ್ಷಗಳಲ್ಲಿ ಈ ಮೇಲ್ಕಂಡ ಜಿಲ್ಲೆಗಳಲ್ಲಿ ಮುಖ್ಯ ಖನಿಜ, ಉಪ ಖನಿಜ ಹಾಗೂ ಮರಳು ಮಾರಾಟ ದಿಂದ ಬಂದಿರುವ ಆದಾಯ ಎಷ್ಟು: (ವಿವರ ನೀಡುವುದು) | • ಕಳೆದ ಎರಡು ವರ್ಷಗಳಲ್ಲಿ ಕಲಬುರಗಿ ಹಾಗೂ ಯಾದಗಿರಿ ಜಿಲ್ಲಾ ವ್ಯಾಪ್ತಿಗಳಲ್ಲಿ ಗಣಿಗಾರಿಕೆಯಿಂದ ಸರ್ಕಾರಕ್ಕೆ ಸಂದಾಯ ವಾಗಿರುವ ರಾಜಸ್ವದ ವಿವರಗಳು ಈ ಕೆಳಕಂಡಂತಿರುತ್ತದೆ:<br><br>ಕ್ರ. ಸಂ. \| ಜಿಲ್ಲೆ \| ಮೊತ್ತ (₹ಕೋಟಿಗಳಲ್ಲಿ)<br>1 \| ಕಲಬುರಗಿ \| 874.00<br>2 \| ಯಾದಗಿರಿ \| 48.40 |
| ಇ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಳೆದ 2 ವರ್ಷಗಳಿಂದ ಅಕ್ರಮ ಮರಳು ಗಣಿಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಆಗಿರುವ ನಷ್ಟ ಎಷ್ಟು? (ವಿವರ ನೀಡುವುದು) | • ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ 2 ವರ್ಷಗಳಲ್ಲಿ ಅಕ್ರಮ ಗಣಿಗಾರಿಕೆ ಸಂಬಂಧ 3 ಪ್ರಕರಣಗಳನ್ನು ಪತ್ತೆ ಹಚ್ಚಿ ಸಂಬಂಧಪಟ್ಟ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲಾಗಿದೆ.<br>• ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ ಅಕ್ರಮ ಮರಳು ಗಣಿಗಾರಿಕೆ ಸಂಬಂಧ ಕಳೆದ 2 ವರ್ಷಗಳಲ್ಲಿ 17 ಪ್ರಕರಣಗಳನ್ನು ಪತ್ತೆಹಚ್ಚಿದ್ದು, 13 ಪ್ರಕರಣಗಳನ್ನು ಸಂಬಂಧಪಟ್ಟ ಪೋಲಿಸ್ ಠಾಣೆಗಳಲ್ಲಿ ಮೊಕದ್ದಮೆ ದಾಖಲಿಸಲಾಗಿದೆ. ಉಳಿದ 4 ಪ್ರಕರಣಗಳಲ್ಲಿ ರೂ.2.50/- ಲಕ್ಷಗಳ ದಂಡವನ್ನು ವಿಧಿಸಿ, ಸಂಗ್ರಹಿಸಲಾಗಿದೆ. |

ಸಂಖ್ಯೆ:ಸಿಐ-ಎಂಎಂಎನ್/293/2025

(ಎಸ್.ಎಸ್.ಮಲ್ಲಿಕಾರ್ಜುನ)
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.